# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. | : | 779 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 21-02-2024 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದೇವನಹಳ್ಳಿಯಿಂದ - ಕೋಲಾರದವರೆಗಿನ ರಸ್ತೆಯು ತುಂಬಾ ಹದಗೆಟ್ಟಿದ್ದು ಸಂಚಾರಕ್ಕೆ ಯೋಗ್ಯವಾಗಿಲ್ಲದಿರುವುದು ಮತ್ತು ವಾಹನ ದಟ್ಟಣೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ದೇವನಹಳ್ಳಿ-ಕೆಂಪಾಪುರ ರಾಜ್ಯ ಹೆದ್ದಾರಿ-96 ರ ಭಾಗವಾದ ದೇವನಹಳ್ಳಿಯಿಂದ - ಕೋಲಾರದವರೆಗಿನ ರಸ್ತೆಯು ಸುಸ್ಥಿತಿಯಲ್ಲಿದ್ದು, ಸಂಚಾರ ಯೋಗ್ಯವಾಗಿರುತ್ತದೆ. ಸದರಿ ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಈ ರಸ್ತೆಯ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು? | ದೇವನಹಳ್ಳಿಯಿಂದ - ಕೋಲಾರದವರೆಗಿನ ಒಟ್ಟು 50.00 ಕಿ.ಮೀ ಉದ್ದದ ರಸ್ತೆಯಲ್ಲಿ, ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಹಂತ-4, ಘಟ್ಟ-1 ರಲ್ಲಿ ಒಟ್ಟು 44.13 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡು 2021-22 ನೇ ಸಾಲಿನಲ್ಲಿ ಪೂರ್ಣಗೊಳಿಸಲಾಗಿರುತ್ತದೆ. ಕೆ.ಐ.ಎ.ಡಿ.ಬಿ ವತಿಯಿಂದ 3.73 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ. ಪ್ರಸ್ತುತ, ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಹಂತ-4, ಘಟ್ಟ-2 ರಡಿಯಲ್ಲಿ 1.40 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.<br><br>ಮುಂದುವರೆದು, ದೇವನಹಳ್ಳಿ-ವಿಜಯಪುರ-ಹೆಚ್.ಕ್ರಾಸ್ -ವೇಮಗಲ್-ಮಾಲೂರು-ತಮಿಳುನಾಡು ಗಡಿಯವರೆಗೆ ಕೈಗಾರಿಕಾ ಸಂಪರ್ಕವನ್ನು ಕಲ್ಪಿಸುವ ನಾಲ್ಕು ಮತ್ತು ಆರು ಪಥದ 123 ಕಿ.ಮೀ ಉದ್ದದ ರಸ್ತೆಯನ್ನು ಹೈಬ್ರಿಡ್ ಆನ್ಯೂಟಿ ಮಾದರಿಯಲ್ಲಿ ರೂ.1826.00 ಕೋಟಿಗಳ ಯೋಜನಾ ಮೊತ್ತದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ (ಕೆಆರ್‌ಡಿಸಿಎಲ್) ವತಿಯಿಂದ ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಲೋಇ ಇ-64 ಇಎಪಿ 2023, ದಿನಾಂಕ:25-01-2024 ರನ್ವಯ ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ. ಪ್ರಸ್ತುತ, ಸದರಿ ಕಾಮಗಾರಿಯ ವಿವರವಾದ ಯೋಜನಾ ವರದಿ ತಯಾರಿಸುವ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ. |

| | | |
|---|---|---|
| ಇ) | ಈ ರಸ್ತೆಯ ಕಾಮಗಾರಿಯ ನಿರ್ಮಾಣದ ವೇಗವು ಕುಂಠಿತವಾಗಿ ಸಾಗುತ್ತಿರಲು ಕಾರಣಗಳೇನು? (ವಿವರಿಸುವುದು) | ಪ್ರಸ್ತುತ, ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಹಂತ–4, ಘಟ್ಟ–2 ರಡಿಯಲ್ಲಿ ದೇವನಹಳ್ಳಿಯಿಂದ – ಕೋಲಾರದವರೆಗಿನ ರಸ್ತೆಯಲ್ಲಿ ಸರಪಳಿ 10.00 ಕಿ.ಮೀ ನಿಂದ 11.40 ಕಿ.ಮೀ ವರೆಗಿನ ಒಟ್ಟು 1.40 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.<br><br>ಸದರಿ ಕಾಮಗಾರಿಯ ಗುತ್ತಿಗೆ ಕರಾರಿನನ್ವಯ ದಿನಾಂಕ:23–09–2024 ರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿದ್ದು, ನಿಗದಿತ ಗುತ್ತಿಗೆ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು. |

ಸಂಖ್ಯೆ: ಲೋಇ E-50 ಇಎಪಿ 2024

**(ಸತೀಶ ಜಾರಕಿಹೊಳಿ)**
ಲೋಕೋಪಯೋಗಿ ಸಚಿವರು